# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

## ಸಿ.ಸಿ. 486/2018

ಸಾಕ್ಷಿದಾರರ ಹೇಳಿಕೆಃ

**ಹೆಸರು** : ರಮೇಶ್ ಚಾಸಾಃ **9** ಪ್ರಾಸಾಃ **3**

**ತಂದೆಯ ಹೆಸರು** : ಕರಿಯಪ್ಪ

**ವಯಸ್ಸು** : **30** ವರ್ಷ

**ವೃತ್ತಿ** : ವ್ಯವಸಾಯ

**ವಾಸಸ್ಥಳ** : ಹನುಮನಹಳ್ಳಿ ಗ್ರಾಮ

ದಿನಾಂಕಃ **26.11.2025** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದ:-

ಈಗೇ ಸುಮಾರು 6 ವರ್ಷಗಳ ಹಿಂದೆ ಪೊಲೀಸರ ಕೋರಿಕೆಯ ಮೇರೆಗೆ 3 ದಾಖಲೆಗಳಿಗೆ ಸಹಿಯನ್ನು ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಮಹಜರ್ ಕ್ರಮ ಜರುಗಿಸಿ, ಕಚ್ಚ ನಕಾಶೆಯನ್ನು ತಯಾರಿಸಿ ಯಾವುದೇ ಸ್ಥಳ ಮಹಜರ್ ನ್ನು ಮಾಡಿರುವುದಿಲ್ಲ. ಸಾಕ್ಷಿಯ 2 ಛಾಯಾಚಿತ್ರಗಳಲ್ಲಿ ತಾನು ಇರುವ ಬಗ್ಗೆ ನೋಡಿ ಗುರುತಿಸಿದ್ದು ಆದರೆ ಯಾವ ವಿಚಾರಕ್ಕೆ ತೆಗೆದಿದ್ದಾರೆ ಎಂಬ ವಿಚಾರ ನನಗೆ ಗೊತ್ತಿಲ್ಲ.

ಪೊಲೀಸ್ ನೋಟೀಸನ್ನು ಈಗಾಗಲೇ ನಿಪಿ-3 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು, ಸ್ಥಳ ಮಹಜರ್ ನ್ನು ಈಗಾಗಲೇ ನಿಪಿ-4 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು, ಕಚ್ಚ ನಕಾಶೆಯನ್ನು ಈಗಾಗಲೇ ನಿಪಿ-5 ಎಂದು ಗುರುತಿಸಿದ್ದು , ಸಾಕ್ಷಿಯ ಸಹಿಯನ್ನು ನಿಪಿ-5(ಬಿ) ಎಂದು, ನಿಪಿ-6 ಮತ್ತು 7 ಛಾಯಾಚಿತ್ರಗಳನ್ನು ಸಾಕ್ಷಿ ನೋಡಿ ಗುರುತಿಸಿರುತ್ತಾರೆ . ಈ ಬಗ್ಗೆ ನಾನು ಪೊಲೀಸರಿಗೆ ಯಾವುದೇ ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.

ಪಾಟೀ ಸವಾಲು :- ಮಾನ್ಯ ಸ.ಸ.ಅ. ರವರಿಂದ:-

ಪೊಲೀಸರಿಂದ ನಿಪಿ-3 ರಂತೆ ನೋಟೀಸನ್ನು ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ. ದಿಃ 12-03.-2018 ರಂದು ಚಾಸಾ-13 ರವರು ಸ್ಥಳ ತೋರಿಸಿದ ಮೇರೆಗೆ ನನ್ನ ಮತ್ತು ಚಾಸಾ-8 ಸಮಕ್ಷಮ ನಿಪಿ-4 ರಂತೆ ಸ್ಥಳ ಮಹಜರ್ ಕ್ರಮ ಸಂಜೆ 4.00 ರಿಂದ 5.00 ಗಂಟೆ ಸಮಯದಲ್ಲಿ ಜರುಗಿಸಿ, ನಿಪಿ-5 ರಂತೆ ಕಚ್ಚ ನಕಾಶೆಯನ್ನು ತಯಾರಿಸಿ, ನಿಪಿ-6 ಮತ್ತು 7 ರಂತೆ ಛಾಯಾಚಿತ್ರಗಳನ್ನು ತೆಗೆದಿದ್ದಾರೆ ಎಂದರೆ ಸರಿಯಲ್ಲ. ಈ ಬಗ್ಗೆ ಪೊಲೀಸರಿಗೆ ನಿಪಿ-10 ರಂತೆ ಹೇಳಿಕೆಯನ್ನು ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು :- ಆರೋಪಿತರ ಪರ ವಕೀಲರು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.